## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:**2008-09ನೇ ಸಾಲಿನಲ್ಲಿ ಮುಂದುವರೆದ ಯೋಜನೆಗಾಗಿ ರಾಷ್ಟ್ರೀಯ ಕುಟುಂಬ ನೆರವು ಯೋಜನೆ ಅಡಿಯಲ್ಲಿ ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಸಧಸ್ಯರು ಮೃತಪಟ್ಟಲ್ಲಿ ಅವರಿಗೆ ಅಂತ್ಯ ಸಂಸ್ಕಾರ ಸಹಾಯ ನಿಧಿಯನ್ನು ಎಲ್ಲಾ ಪ್ರಾದೇಶಿಕ ಆಯುಕ್ತರುಗಳಿಗೆ ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:**1)ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 20 ಎಂಎಸ್‌ಟಿ 06, ದಿನಾಂಕ:27/01/2007.
2)ಸರ್ಕಾರದ ಆದೇಶ ಸಂ:ಕಂ.ಇ 79 ಸಮಿತಿ 2008, ಬೆಂಗಳೂರು. ದಿನಾಂಕ:17/05/2008.
3)ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಇಪಿ 2008, ಬೆಂಗಳೂರು,ದಿನಾಂಕ:16/05/2008.
4)ಸರ್ಕಾರದ ಆದೇಶ ಸಂ:ಆರ್‌ಡಿ 2 ಎಎಸ್‌ವೈ 2008, ದಿನಾಂಕ:23/04/2008.

**ಪ್ರಸ್ತಾವನೆ.**

ರಾಜ್ಯ ಸರ್ಕಾರವು ರಾಷ್ಟ್ರೀಯ ಕುಟುಂಬ ನೆರವು ಯೋಜನೆ ಅಡಿಯಲ್ಲಿ 2008-09ನೇ ಸಾಲಿನ ಆಯವ್ಯಯದಲ್ಲಿ ರೂ.2500.00ಗಳನ್ನು ಒದಗಿಸಲಾಗಿರುತ್ತದೆ. ಈ ಅನುದಾನದ ಪೈಕಿ 1/3 ಭಾಗದಷ್ಟು ಆಯವ್ಯಯದ ಅನುದಾನ ಅಂದರೆ ರೂ.833.00 ಲಕ್ಷಗಳಿದ್ದು ಈ ಪೈಕಿ ರಾಷ್ಟ್ರೀಯ ಕುಟುಂಬ ನೆರವು ಯೋಜನೆ ಅಡಿಯಲ್ಲಿ ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಸಧಸ್ಯರು ಮೃತಪಟ್ಟಲ್ಲಿ ಅವರಿಗೆ ಅಂತ್ಯ ಸಂಸ್ಕಾರಕ್ಕಾಗಿ ಕುಟುಂಬದ ಸಧಸ್ಯರಿಗೆ ರೂ.1000.00ಗಳಂತೆ ನೀಡಲು ರಾಜ್ಯ ಸರ್ಕಾರವು ಈ ಯೋಜನೆಯ ಅನುಷ್ಠಾನಕ್ಕಾಗಿ 2006.07ನೇ ಹಾಗೂ 2007-08ನೇ ಸಾಲಿನಲ್ಲಿ ಕ್ರಮವಾಗಿ ರೂ.722.49 ಮತ್ತು 833.00ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿತ್ತು. ಈ ಯೋಜನೆಯನ್ನು 2008-09ನೇ ಸಾಲಿನಲ್ಲೂ ಮುಂದುವರೆಸಲಾಗಿದ್ದು, ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ದಿನನಿತ್ಯದ ಜೀವನ ನಡೆಸಲು ಸಾಧ್ಯವಿಲ್ಲದಿರುವಂತಹ ಕುಟುಂಬಗಳಿಗೆ 2006-07ನೇ ಸಾಲಿನಲ್ಲಿ ಈ ಯೋಜನೆ ಅನುಷ್ಠಾನಕ್ಕಾಗಿ ಹೊರಡಿಸಲಾಗಿರುವ ಮಾರ್ಗಸೂಚಿಗಳಿಗೆ ಅನುಗುಣವಾಗಿ ಜಾರಿಗೊಳಿಸಬೇಕೆಂದು ಸೂಚಿಸಿದೆ. ಮೇಲೆ ಓದಲಾದ ಉಲ್ಲೇಖ (4)ರನ್ವಯ ಸಂಬಂಧಪಟ್ಟ ಪ್ರಾದೇಶಿಕ ಆಯುಕ್ತರುಗಳಿಗೆ ಅನುದಾನ ಬಿಡುಗಡೆ ಮಾಡಿ ಅವರ ವ್ಯಾಪ್ತಿಗೆ ಬರುವ ಜಿಲ್ಲಾಧಿಕಾರಿಗಳಿಗೆ ಮರುಹಂಚಿಕೆ ಮಾಡಲು ಆದೇಶಿಸಲಾಗಿದೆ. ಅದರಂತೆ 2008-09ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಮೊತ್ತ ರೂ.833.00ಲಕ್ಷಗಳ ಪೈಕಿ ಮೊದಲ ಹಂತವಾಗಿ ರೂ.200.00 ಲಕ್ಷಗಳನ್ನು ಬಿಡುಗಡೆ ಮಾಡಲು ಉದ್ದೇಶಿಸಿದ್ದು, ಅದರಂತೆ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 3 ಎಎಸ್‌ವೈ 2008, ಬೆಂಗಳೂರು. ದಿನಾಂಕ: 26/05/2008.**

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಸಧಸ್ಯರು ಮೃತ ಹೊಂದಿದಲ್ಲಿ ಅವರ ಅಂತ್ಯ ಸಂಸ್ಕಾರಕ್ಕಾಗಿ "ಅಂತ್ಯ ಸಂಸ್ಕಾರ ಸಹಾಯ ನಿಧಿ" (Grant for Funeral Expenses) ನೆರವು ಯೋಜನೆಯಡಿ ರೂ.1000.00ಗಳನ್ನು ನೀಡಲು ರೂ. 200.00 ಲಕ್ಷಗಳನ್ನು (ರೂಪಾಯಿ ಎರಡು ನೂರು ಲಕ್ಷಗಳು ಮಾತ್ರ) ಸಂಬಂಧಿಸಿದ ಎಲ್ಲಾ ಪ್ರಾದೇಶಿಕ ಆಯುಕ್ತರುಗಳಿಗೆ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧ-1 ರ ಅನ್ವಯ ಬಿಡುಗಡೆ ಮಾಡುತ್ತಾ, ತಮ್ಮ ವ್ಯಾಪ್ತಿಯ ಜಿಲ್ಲಾಧಿಕಾರಿಗಳ ಬೇಡಿಕೆಯನ್ನು ಅನುಸರಿಸಿ ಅಗತ್ಯ ಅನುದಾನವನ್ನು ಮರು ಹಂಚಿಕೆ ಮಾಡಲು ಆದೇಶಿಸಿದೆ.

ಮೇಲ್ಕಂಡಂತೆ ಮಂಜೂರಾದ ಮೊತ್ತವು ಅಂತ್ಯ ಸಂಸ್ಕಾರ ನೆರವು ಯೋಜನೆಯ ಅನುಷ್ಠಾನಕ್ಕೆ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಅನುದಾನವನ್ನು ರಾಷ್ಟ್ರೀಯ ಸಾಮಾಜಿಕ

ಯೋಜನೆಯಡಿಯ ಮಾರ್ಗಸೂಚಿಯಲ್ಲಿ ನಿಗದಿಪಡಿಸಿರುವ ಷರತ್ತುಗಳಿಗೊಳಪಟ್ಟು ವಿನಿಯೋಗಿಸತಕ್ಕದ್ದು.

ಎಲ್ಲಾ ಪ್ರಾದೇಶಿಕ ಅಯುಕ್ತರು ಈ ಯೋಜನೆ ಕುರಿತು ಎಲ್ಲಾ ಜಿಲ್ಲಾಧಿಕಾರಿಗಳ ಮೂಲಕ ವಿಸ್ತಾರವಾಗಿ ಪ್ರಚಾರ ನೀಡತಕ್ಕದ್ದು.

ಈ ಯೋಜನೆಗೆ ತಗಲುವ ವೆಚ್ಚವನ್ನು 2008-09 ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 2235-60-102-1-03-059 (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು. ಈ ಯೋಜನೆಯ ಅಂಕಿ ಅಂಶಗಳ ವರದಿಯ ಜೊತೆಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಸೀಲ್ದಾರ್ ಹಾಗೂ ಜಿಲ್ಲಾಧಿಕಾರಿಗಳು ಪ್ರಾದೇಶಿಕ ಆಯುಕ್ತರಿಗೆ ಸಲ್ಲಿಸತಕ್ಕದ್ದು. ಪ್ರಾದೇಶಿಕ ಆಯುಕ್ತರು ಪ್ರತಿ ತಿಂಗಳ 10ನೇ ತಾರೀಖಿನೊಳಗೆ ತಾಲ್ಲೂಕುವಾರು ಮತ್ತು ಜಿಲ್ಲಾವಾರು ಹಣ ಬಳಕೆ ಪ್ರಮಾಣ ಪತ್ರವನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಮತ್ತು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ. 1. ಟಿಎಫ್‌ಪಿ. 96, ದಿನಾಂಕ: 10/07/1996 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ನೀಡಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಭಾರತದ ರಾಷ್ಟ್ರಾಧ್ಯಕ್ಷರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ಕಾತ್ಯಾಯಿನಿ ದೇವಿ) 26/5/08
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಿಬೇಕೆಂದು ಕೋರಿದೆ.

**ಪ್ರತಿಯನ್ನು**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ.ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
4. ಪ್ರಾದೇಶಿಕ ಆಯುಕ್ತರು.ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
5. ಎಲ್ಲಾ ಜಿಲ್ಲಾಧಿಕಾರಿಗಳು.
6. ನಿರ್ದೇಶಕರು.ಖಜಾನೆ ಇಲಾಖೆ.ಬೆಂಗಳೂರು.
7. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
8. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.

ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.3 ಎಎಸ್‌ವೈ 2008 ಕ್ಕೆ ಅನುಬಂಧ-1.

| ಕ್ರ.ಸಂ | ಪ್ರಾದೇಶಿಕ ಆಯುಕ್ತರುಗಳ ಹೆಸರು | ಬಿಡುಗಡೆ ಮಾಡಲಾದ ಅನುದಾನದ ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | ಪ್ರಾದೇಶಿಕ ಆಯುಕ್ತರು. ಬೆಂಗಳೂರು ವಿಭಾಗ | 50.00 |
| 2 | ಪ್ರಾದೇಶಿಕ ಆಯುಕ್ತರು. ಬೆಳಗಾಂ ವಿಭಾಗ | 50.00 |
| 3 | ಪ್ರಾದೇಶಿಕ ಆಯುಕ್ತರು. ಮೈಸೂರು ವಿಭಾಗ | 50.00 |
| 4 | ಪ್ರಾದೇಶಿಕ ಆಯುಕ್ತರು. ಗುಲ್ಬರ್ಗಾ ವಿಭಾಗ | 50.00 |

(ಎಸ್. ಕಾತ್ಯಾಯಿನಿ ದೇವಿ) 26/5/08
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.